ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸ್ಪೀಕರ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 12/11/2019

# ನಾಳೆ ಅನರ್ಹರ ಭವಿಷ್ಯ ನಿರ್ಧಾರ

**ವಿಕ ಸುದ್ದಿಲೋಕ** ಬೆಂಗಳೂರು

ತಮ್ಮ ರಾಜಕೀಯ ಭವಿಷ್ಯ ನಿರ್ಧರಿಸಲಿರುವ ಸುಪ್ರೀಂಕೋರ್ಟ್ ತೀರ್ಪು ಬುಧವಾರ ಪ್ರಕಟಗೊಳ್ಳಬಹುದೆಂಬ ನಿರೀಕ್ಷೆಯಲ್ಲಿರುವ ಅನರ್ಹರು ಮಂಗಳವಾರ ದಿಲ್ಲಿಗೆ ತೆರಳುವ ಸಾಧ್ಯತೆಗಳಿವೆ.

ಈ ಮಧ್ಯೆ, ಡಿಸೆಂಬರ್ 5ರಂದು ನಿಗದಿಯಾಗಿರುವ 15 ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಸೋಮವಾರದಿಂದ ಆರಂಭವಾಗಿದ್ದರೂ ತಮ್ಮ ಸ್ಪರ್ಧೆ ಬಗ್ಗೆ ಸ್ಪಷ್ಟತೆ ಇಲ್ಲದ ಕಾರಣ ತೀವ್ರ ಆತಂಕದಲ್ಲಿದ್ದಾರೆ. ಅನರ್ಹರು ಮಂಗಳವಾರ ದಿಲ್ಲಿಗೆ ತೆರಳಿ ವಕೀಲರ ಜತೆ ಸಮಾಲೋಚನೆ ನಡೆಸಲು ನಿರ್ಧರಿಸಿದ್ದಾರೆ.



ಶಾಸಕತ್ವವನ್ನು ಅನರ್ಹಗೊಳಿಸಿದ್ದ ಸ್ಪೀಕರ್ ನಿರ್ಧಾರ ಪ್ರಶ್ನಿಸಿ 17 ಶಾಸಕರು ಸಲ್ಲಿಸಿದ್ದ ಅರ್ಜಿ ವಿಚಾರಣೆ ಅಕ್ಟೋಬರ್ 26ರಂದೇ ಪೂರ್ಣಗೊಂಡಿದ್ದು, ತೀರ್ಪು ಬಾಕಿ ಇದೆ. ನವೆಂಬರ್ 4 ಇಲ್ಲವೇ 5ರಂದು ತೀರ್ಪು ಪ್ರಕಟಗೊಳ್ಳಬಹುದೆಂದು ಅನರ್ಹರು ನಿರೀಕ್ಷಿಸಿದ್ದರು. ಆದರೆ ತೀರ್ಪು ಪ್ರಕಟಣೆ ಬಗ್ಗೆ ಸುಪ್ರೀಂಕೋರ್ಟ್ ಇದುವರೆಗೂ ದಿನಾಂಕ ನಿಗದಿಪಡಿಸಿಲ್ಲ. ಈ ಮಧ್ಯೆ, ಪ್ರಕರಣದ ವಿಚಾರಣೆ ಮುಗಿದು ತೀರ್ಪು ಬಾಕಿ ಇರುವ ಹಂತದಲ್ಲಿ ಡಿ.5ರ ಚುನಾವಣೆಗೆ ನ.11ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಹೀಗಾಗಿ ಚುನಾವಣೆ ಮುಂದೂಡುವಂತೆ ಚುನಾವಣಾ ಆಯೋಗಕ್ಕೆ ಸೂಚನೆ ಕೊಡಬೇಕೆಂದು ಅನರ್ಹರ ಪರವಾಗಿ ಹಿರಿಯ ನ್ಯಾಯವಾದಿ ಮುಕುಲ್ ರೋಹಟಗಿ ಮನವಿ ಮಾಡಿದ್ದ ಅರ್ಜಿ ವಿಚಾರಣೆಯನ್ನು ಬುಧವಾರಕ್ಕೆ ನಿಗದಿಪಡಿಸಲಾಗಿದೆ.